# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿರುವ ಹಚ್ಚಿನ್ಸ್ ಪಾರ್ಕ್‌ನಲ್ಲಿ ದಿನಾಂಕ: 27-05-2021 ರಂದು ನಡೆದ ವಾರ್ಡ್ ಡೆಟರ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿಗಳು ಮತ್ತು ಸಂಚಾಲಕರು,

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ನಾಗೇಂದ್ರ ಪ್ರಸಾದ್, ಕಂದಾಯ ವಸೂಲಿಗಾರರು,
2. ಶ್ರೀ ಜಿ.ವಿ ನಾಗರಾಜ್, ಅಸೆಸ್ಸರ್, ಮಾರುತಿಸೇವಾನಗರ,
3. ಶ್ರೀ ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು
4. ಶ್ರೀ ನವೀನ್, ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ
5. ಶ್ರೀ ಸಿ.ಎಂ. ವೆಂಕಟೇಶ್, ತೋಟಗಾರಿಕಾ ಇಲಾಖೆ
6. ಸ್ವಯಂ ಸೇವಕರು,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಹಾಗೂ ಸ್ವಯಂ ಸೇವಕರನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1) ಮಾನ್ಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳು ಮಾತನಾಡಿ, ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯಲ್ಲಿ **Ward Decentralized Triage and Emergency Response (DETER) Committee for COVID 19 Management (WDC)** ರಚಿಸಲಾಗಿದ್ದು, ಸಭೆಯಲ್ಲಿ ಹಾಜರಿದ್ದ ಸ್ವಯಂ ಸೇವಕರ ಕಾರ್ಯವೈಖರಿಯ ಬಗ್ಗೆ ಮಾನ್ಯ ಆಯುಕ್ತರು ನಿರ್ದೇಶನದಂತೆ ತಿಳಿಸಲಾಯಿತು.

2) ಪ್ರಸ್ತುತ ಕೋವಿಡ್ ಸೋಂಕು ಯತೇಚ್ಛವಾಗಿ ಹರಡುತ್ತಿದ್ದು, ಸಾರ್ವಜನಿಕರು ಕಡ್ಡಾಯವಾಗಿ ಮಾಸ್ಕ್ ಧರಿಸುವುದು, ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು ಹಾಗೂ ಅನಾವಶ್ಯಕವಾಗಿ ಹೊರಗಡೆ ತಿರುಗಾಡದೇ ಇರುವಂತೆ ಸಾರ್ವಜನಿಕರಿಗೆ ಅರಿವು ಮೂಢಿಸುವುದು ಹಾಗೂ ಸೋಂಕಿತರ ಮನೆಯನ್ನು ಗುರುತಿಸಿ, ಅವರಿಗೆ ಸೋಂಕಿನ ಬಗ್ಗೆ ಅರಿವು ಮೂಡಿಸಿ, ಮನೆಯ ಎಲ್ಲಾ ಸದಸ್ಯರು ಜಾಗೃತರಾಗಿರುವಂತೆ ಸಲಹೆ ನೀಡಲು ಸಭೆಯಲ್ಲಿ ಹಾಜರಿದ್ದ ಸ್ವಯಂ ಸೇವಕರಿಗೆ ತಿಳಿಸಿದರು.

3) ವಾರ್ಡ್ ಕಮಟಿಯಲ್ಲಿ ನಿಯೋಜಿಸಿರುವ ಸ್ವಯಂ ಸೇವಕರು ಕಡ್ಡಾಯವಾಗಿ ಲಸಿಕೆಯನ್ನು ಹಾಕಿಸಿಕೊಂಡು, ನಂತರ ಲಸಿಕೆಯ ಬಗ್ಗೆ ವಾರ್ಡ್ ವ್ಯಾಪ್ತಿಯ ಎಲ್ಲಾ ಸಾರ್ವಜನಿಕರಿಗೆ ಲಸಿಕೆ ಹಾಕಿಸಿಕೊಳ್ಳಲು ಅರಿವು ಮೂಢಿಸಲು ತಿಳಿಸಿದರು.



Scanned with CamScanner

4) ವಾರ್ಡ್ ವ್ಯಾಪ್ತಿಯಲ್ಲಿ ಸೋಂಕಿತ ಪ್ರಕರಣಗಳು ಹೆಚ್ಚಾಗಿರುವ ಪ್ರದೇಶದಲ್ಲಿ ಕಡ್ಡಾಯವಾಗಿ ಸೋಡಿಯಂ ಹೈಪೋಕ್ಲೋರೈಡ್ ದ್ರಾವಣವನ್ನು ಸಿಂಪಡಿಸಿ, ಸದರಿ ಪ್ರದೇಶವನ್ನು ಸ್ಯಾನಿಟೈಸೇಷನ್ ಮಾಡಲು ಜಾಗೃತಿ ಮೂಢಿಸಲು ಸಭೆಗೆ ತಿಳಿಸಿದರು.

5) ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ಸೋಂಕಿತ ವ್ಯಕ್ತಿಗಳ ಪ್ರಾಥಮಿಕ ಆರೈಕೆಗಾಗಿ ಕೋವಿಡ್ Triage Center ಅನ್ನು ಡಾ॥ ಅಂಬೇಡ್ಕರ್ ಕಾಲೇಜಿನಲ್ಲಿ ತೆರೆಯಲು ಸ್ಥಳಾವಕಾಶ ಕಲ್ಪಿಸಲಾಗಿದ್ದು, ಡಾ॥ ಅಂಬೇಡ್ಕರ್ ಕಾಲೇಜಿನಲ್ಲಿ ಸುಮಾರು 100 ಬೆಡ್‌ಗಳ ವ್ಯವಸ್ಥೆ ಕಲ್ಪಿಸಲಾಗಿರುತ್ತದೆ ಹಾಗೂ ಕೋವಿಡ್ ಕೇರ್ ಸೆಂಟರ್ ಕಾಚರಕನಹಳ್ಳಿ, ಹೆಚ್.ಬಿ.ಆರ್ ಮುಖ್ಯರಸ್ತೆಯಲ್ಲಿ ನೂತನವಾಗಿ 60 ಬೆಡ್‌ಗಳ ಕೇಂದ್ರವನ್ನು ಆರಂಭಿಸಲು ಉದ್ದೇಶಿಸಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಲು ಸಭೆಯಲ್ಲಿ ತಿಳಿಸಲಾಯಿತು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ವಿಷಯಗಳ ಬಗ್ಗೆ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

**ಪ್ರತಿಯನ್ನು**

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.



Scanned with CamScanner